ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :—

ಪ್ರ 82

ಅ) 1997-98ನೇ ಸಾಲಿನ ವಿಭಾಗೀಯ ನೇಮಕಾತಿಯಲ್ಲಿ ಹೆಚ್ಚುವರಿ ಪಟ್ಟಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳಿಂದ ಕೌನ್ಸಿಲಿಂಗ್ ವಿಧಾನದಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

*ಕುಣಿಗಲ್ ತಾಲ್ಲೂಕಿನ ಗುನ್ನಾಗೆರೆಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ.*

35(148) ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್) :— ಮಾನ್ಯ ಆರೋಗ್ಯ ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ತುಮಕೂರು ಜಿಲ್ಲೆಯ ಕುಣಿಗಲ್ ತಾಲ್ಲೂಕಿನ ಗುನ್ನಾಗೆರೆಯಲ್ಲಿ ಪ್ರಾ. ಆ.ಕೇಂದ್ರ ತೆರೆಯುವ ಅವಶ್ಯಕತೆ ಇದೆ ಎನ್ನುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದಲ್ಲಿ, ಅದನ್ನು ಎಂದಿನಿಂದ ತೆರೆಯಲಾಗುವುದು.

ಡಾ: ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ಬಂದಿದೆ.

ಆ) ರಾಜ್ಯದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮಂಜೂರು ಮಾಡುವ ಬಗ್ಗೆ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

*ಸ್ವಸ್ತಿ ಯೋಜನೆ ರಾಜ್ಯದಲ್ಲಿ ಅನುಷ್ಠಾನಗೊಳ್ಳುತ್ತಿರುವ ಬಗ್ಗೆ.*

36(149) ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್) :— ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಸ್ವಸ್ತಿ ಯೋಜನೆ ರಾಜ್ಯದಲ್ಲಿ ಅನುಷ್ಠಾನಗೊಳ್ಳುತ್ತಿದೆಯೇ?

ಆ) ಹಾಗಿದ್ದಲ್ಲಿ, ಇದುವರೆಗೆ ಆಗಿರುವ ಪ್ರಗತಿ ಎಷ್ಟು?

ಇ) ತುಮಕೂರು ಜಿಲ್ಲೆಯಲ್ಲಿ ಈ ಯೋಜನೆಯ ಅಡಿಯಲ್ಲಿ ಆಗಿರುವ ಪ್ರಗತಿ ಎಷ್ಟು?

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):—

ಅ) ಹೌದು.

ಆ) ಇದುವರೆಗೂ ರೂ. 149.198 ಲಕ್ಷ ಖರ್ಚಾಗಿರುತ್ತದೆ.

ಇ) ತುಮಕೂರು ಜಿಲ್ಲೆಯಲ್ಲಿ ಕುಣಿಗಲ್ ತಾಲ್ಲೂಕಿನ ಕಗ್ಗೆರೆ ಗ್ರಾಮವನ್ನು ಈ ಯೋಜನೆಯಡಿಯಲ್ಲಿ ಆಯ್ಕೆ ಮಾಡಲಾಗಿದ್ದು ಪ್ರಾಯೋಜಕರ ಸಹಮತಿಯನ್ನು ನಿರೀಕ್ಷಿಸಲಾಗಿದೆ. ಸಹಮತಿ ದೊರಕಿದ ನಂತರ ಮಾರ್ಗ ಸೂಚಿಯನ್ವಯ ಕ್ರಿಯಾ ಯೋಜನೆಯನ್ನು ತಯಾರಿಸಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುವುದು.

*ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳ ಸಂಖ್ಯೆ*

37(151) ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್):— ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳ ಸಂಖ್ಯೆ ಎಷ್ಟು?

ಆ) ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ತೆಗೆದುಕೊಂಡ ಕ್ರಮಗಳು ಯಾವುವು?

ಶ್ರೀ ಬಿ.ಎ. ಮೊಹಿದ್ದೀನ್ (ಉನ್ನತ ಶಿಕ್ಷಣ ಸಚಿವರು):—

ಅ) 469

ಆ) ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ ಭರ್ತಿ ಮಾಡಲು ಕ್ರಮ ಜರುಗಿಸಲಾಗುತ್ತಿದೆ.

*<u>ಮೈಸೂರು ನಗರದ ಕೆ.ಆರ್. ಆಸ್ಪತ್ರೆಯಲ್ಲಿ ವೈದ್ಯರ ನಿರ್ಲಕ್ಷ್ಯದಿಂದ ರೋಗಿ ಮೃತಪಟ್ಟ ಬಗ್ಗೆ.</u>*

38(405) ಶ್ರೀ ಇ. ಮಾರುತಿರಾವ್ ಪವಾರ್ (ನರಸಿಂಹರಾಜ):— ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.